**ಕರ್ನಾಟಕ ವಿಧಾನ ಪರಿಷತ್**

01. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1036

02. **ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು** : **ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)**

03. **ಉತ್ತರಿಸುವ ದಿನಾಂಕ** : 14.12.2023

04. **ಉತ್ತರಿಸುವ ಸಚಿವರು.** : **ಗೃಹ ಸಚಿವರು.**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸೈಬರ್ ವಂಚನೆ ದೋಖಾ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ದೋಖಾ ನಿಯಂತ್ರಣಕ್ಕೆ ಸರ್ಕಾರದ ಕೈಗೊಂಡಿರುವ ಕ್ರಮಗಳೇನು; | **ಹೌದು,** ಸದರಿ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br>❖ ಸರ್ಕಾರವು ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವಾಪ್ತಿಯಲ್ಲಿ ಒಂದೊಂದು ಸೈಬರ್ ಪೋಲೀಸ್ ಠಾಣೆಗಳನ್ನು (ಸಿ.ಇ.ಎನ್ ಪೋಲೀಸ್ ಠಾಣೆ) ಸ್ಥಾಪಿಸಿರುತ್ತದೆ. ಒಟ್ಟು 43 ಸಿ.ಇ.ಎನ್ ಪೋಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.<br>❖ ಅಲ್ಲದೆ ಪ್ರತಿ ಪೋಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br>❖ ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸರ್ಕಾರವು ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ಸಾರ್ವಜನಿಕರಿಗೆ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳಿಂದಲೂ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.<br>❖ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cybercrime Investigation Training & Research (CCITR) ಘಟಕವನ್ನು ಪ್ರಾರಂಭಿಸಲಾಗಿದ್ದು, ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.<br>❖ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೋಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>❖ ಸಿಐಡಿಯ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ 2019 ರಿಂದ ಸರ್ಕಾರಿ ಸಂಸ್ಥೆಗಳು ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೋಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ. |

<table>
<tr>
<td></td>
<td></td>
<td>❖ ಪ್ರಸಕ್ತ 2023 ನೇ ಸಾಲಿನಲ್ಲಿ ಸಿಐಡಿ ಕಚೇರಿಯಲ್ಲಿ ಸಿಸಿಐಟಿಆರ್ ಘಟಕದಲ್ಲಿ ಕೈಗೊಂಡ ತರಬೇತಿ ವಿವರಗಳನ್ನು ಈ ಕೆಳಕಂಡಂತೆ ಒದಗಿಸಲಾಗಿದೆ<br><br>1. ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗಾಗಿ ಸಂಬಂಧಿಸಿದಂತೆ(Cyber Investigation Manual) ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ.<br><br>2. ರಾಜ್ಯದಲ್ಲಿ ಸುಸಜ್ಜಿತವಾದ ನ್ಯಾಯವಿಜ್ಞಾನ ಪ್ರಯೋಗಾಲಯವು ಕಾರ್ಯನಿರ್ವಹಿಸುತ್ತಿದ್ದು, ಸೈಬರ್ ಕ್ರೈಂ ಆಪರಾದಗಳಲ್ಲಿ ತನಿಖೆಗೆ ಸಂಬಂಧಿಸಿದಂತೆ ತಾಂತ್ರಿಕ ನೇರವು ನೀಡಲಾಗುತ್ತಿದೆ</td>
</tr>
<tr>
<td>ಆ)</td>
<td>ಈ ಸಂಬಂಧ ದಾಖಲಾದ ದೂರುಗಳ ಸಂಖ್ಯೆ ಎಷ್ಟು ಎಷ್ಟು ದೂರುಗಳನ್ನು ವಿಲೇ ಮಾಡಲಾಗಿದೆ; (ಜಿಲ್ಲಾವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)</td>
<td>ಕಳೆದ ಮೂರು ವರ್ಷಗಳಲ್ಲಿ ಸೈಬರ್ ಅಪರಾಧಗಳಡಿಯಲ್ಲಿ ದಾಖಲಿಸಿರುವ ಮತ್ತು ಪತ್ತೆ ಹಚ್ಚಲಾಗಿರುವ ಪ್ರಕರಣಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.</td>
</tr>
<tr>
<td>ಇ)</td>
<td>ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳನ್ನು ಪತ್ತೆ ಹಚ್ಚಿ ಶಿಕ್ಷೆ ವಿಧಿಸಲಾಗಿರುತ್ತದೆ;</td>
<td>ಶಿಕ್ಷೆ ವಿಧಿಸಲಾಗಿರುವ ಪ್ರಕರಣಗಳ ವಿವರಗಳು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ನ್ಯಾಯಾಲಯದ ವಿಚಾರಣೆಯಲ್ಲಿರುವ ಪ್ರಕರಣಗಳು</th><th>ಶಿಕ್ಷೆಯಾಗಿರುವ ಸೈಬರ್ ಅಪರಾಧಗಳ ಸಂಖ್ಯೆ.</th></tr>
<tr><td>2021</td><td>376</td><td>19</td></tr>
<tr><td>2022</td><td>859</td><td>18</td></tr>
<tr><td>2023 (25 ನವೆಂಬರ್)</td><td>277</td><td>14</td></tr>
</table>
</td>
</tr>
<tr>
<td>ಈ)</td>
<td>ಉಳಿಕೆ ಪ್ರಕರಣಗಳ ತನಿಖೆಯನ್ನು ನಿಗಧಿತ ಕಾಲಮಿತಿಯೊಳಗೆ ಮುಗಿಸಲು ಕೈಗೊಂಡಿರುವ ಕ್ರಮಗಳೇನು?</td>
<td>ಸೈಬರ್ ಅಪರಾಧ ಪ್ರಕರಣಗಳ ತನಿಖೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ತನಿಖಾಧಿಕಾರಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ. ಹಾಗೂ ಸದರಿ ಪ್ರಕರಣಗಳ ತನಿಖೆಯನ್ನು ನಿಯಮಾನುಸಾರ ಕೈಗೊಳ್ಳಲು ಕ್ರಮ ವಹಿಸಲಾಗಿದೆ.</td>
</tr>
</table>

| | | |
|---|---|---|
| — | | ರಾಜ್ಯದಲ್ಲಿ ಸೈಬರ್ ಕ್ರೈಂ ಅಪರಾಧಗಳನ್ನು ಶೀಘ್ರವಾಗಿ ವಿಲೇವಾರಿಗೊಳಿಸಲು ಹಾಗೂ ಪ್ರಕರಣದಲ್ಲಿ ತಾಂತ್ರಿಕವಾಗಿ ಸಲಹೆಗಳನ್ನು ನೀಡುವ ನಿಟ್ಟಿನಲ್ಲಿ ಡಿಜಿ ಮತ್ತು ಐಜಿಪಿ ರವರಿಂದ ಸೂಕ್ತ ಆದೇಶವನ್ನು ಹೊರಡಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ಪೊಲೀಸ್ ಮಹಾ ನಿರ್ದೇಶಕರು, ಸಿಐಡಿ ರವರ ಸೂಕ್ತ ಮಾರ್ಗದರ್ಶನದಲ್ಲಿ ರಾಜ್ಯದಲ್ಲಿನ ಎಲ್ಲಾ ಸೇನ್ ಪೊಲೀಸ್ ಠಾಣೆಗಳಲ್ಲಿ ದಾಖಲಾಗುವ ಸೈಬರ್ ಅಪರಾಧ ಪ್ರಕರಣಗಳನ್ನು ಪರಿಶೀಲಿಸಿ ತನಿಖಾಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ಹಾಗೂ ತರಬೇತಿಗಳನ್ನು ಆಯೋಜಿಸುವಂತೆಯೂ ಸಹ ಸೂಚಿಸಲಾಗಿದೆ. |

**HD/35/PCQ/2023**

(ಡಾ:ಜಿ.ಪರಮೇಶ್ವರ)
ಗೃಹ ಸಚಿವರು

